ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1251/2021

ಚಾಸಾ:2 ಪ್ರಾಸಾ:2

ದಿನಾಂಕ: 18.02.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಚಂದ್ರಶೇಖರ |
| ತಂದೆಯ ಹೆಸರು | : | ಜಗನ್ನಾಥ ಶೆಟ್ಟಿ |
| ವಯಸ್ಸು | : | 42 ವರ್ಷ |
| ಉದ್ಯೋಗ | : | ವ್ಯಾಪಾರ |
| ವಾಸ ಸ್ಥಳ | : | ಕಟ್ಕೇರಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿಯ ಪರಿಚಯವಿಲ್ಲ. ಮೃತ ಪ್ರವೀಣ್ ಪರಿಚಯವಿಲ್ಲ. ನಾನು ಯಾವುದೇ ಅಪಘಾತ ನೋಡಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

ಸಾಕ್ಷಿ ದ್ವಿ ಚಕ್ರ ವಾಹನ ಹಾಗೂ ಬಸ್ಸಿನ ಪೋಟೋಗಳನ್ನು ನೋಡಿ ಗುರುತಿಸಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 18-02-2021 ರಂದು ರಾತ್ರಿ 9-30ರ ಸಮಯದಲ್ಲಿ ಕೊಟೇಶ್ವರದ ಹಾಲಾಡಿ ರಸ್ತೆಯಲ್ಲಿ ಚಾಸಾ-1 ಮತ್ತು ಪ್ರವೀಣ್ ರವರು ತಮ್ಮ ಪ್ರತ್ಯೇಕ ಗಾಡಿಗಳಲ್ಲಿ ಪ್ರೀತಂ ಬಾರ್ ಹತ್ತಿರ ಬರುತ್ತಿದ್ದಾಗ ಎದುರುಗಡೆ ಅಂದರೆ ಹಾಲಾಡಿಯಿಂದ ಕೊಟೇಶ್ವರದ ಕಡೆಗೆ ನಾವು ಬರುತ್ತಿದ್ದು ಪ್ರವೀಣ್ ರವರು ಕೆಎ-20-ಇವಿ-9759 ಗಾಡಿಯನ್ನು ಚಲಾಯಿಸಿಕೊಂಡು ಬರುತ್ತಿದ್ದು, ಕೋಟೆಶ್ವರದ ಕಡೆಯಿಂದ ಹಾಲಾಡಿ ಕಡೆಗೆ ಹೋಗುತ್ತಿದ್ದ ಆರೋಪಿ ಚಲಾಯಿಸುತ್ತಿದ್ದ ಕೆಎ-20-ಡಿ-7017 ಬಸ್ಸನ್ನು

ಅತೀ ವೇಗ ಹಾಗೂ ನಿಲಕ್ಷ್ಯತನದಿಂದ ರಸ್ತೆಯ ತೀರ ಬಲ ಬದಿಗೆ ಚಲಾಯಿಸಿಕೊಂಡು ಬಂದು ಪ್ರವೀಣ್ ರವರ ಗಾಡಿಗೆ ಡಿಕ್ಕಿ ಪಡಿಸಿದ ಪರಿಣಾಮ ಆತ ಮೋಟಾರು ಸೈಕಲು ಸಮೇತ ರಸ್ತೆಗೆ ಬಿದ್ದು ಚಿಕಿತ್ಸೆಗಾಗಿ ಎನ್ ಆರ್ ಆಚಾರ್ಯ ಆಸ್ಪತ್ರೆಗೆ ಸಾಗಿಸುವ ವೇಳೆಗೆ ಮೃತಪಟ್ಟಿರುತ್ತಾರೆ ಎಂದರೆ ಸರಿಯಲ್ಲ. ಇದೇ ವಿಚಾರವಾಗಿ ನಾನು ದಿಃ 19-02-2021 ರಂದು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ನಾನು ಅಪಘಾತದ ಪ್ರತ್ಯಕ್ಷದರ್ಶಿಯಾಗಿ ಆರೋಪಿಯ ನಿರ್ಲಕ್ಷ್ಯತನದ ಚಾಲನೆಯಿಂದ ಪ್ರವೀಣ್ ರವರು ಮೃತಪಟ್ಟಿದ್ದರೂ ಎಂದು ನನಗೆ ತಿಳಿದಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.</u>**

**<u>ಮರು ವಿಚಾರಣೆಃ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**